<u>ಅಸಲು ದಾವಾ ಸಂಖ್ಯೆ</u>**<u>- 5/2015</u>** ಪಿ.ಡಬ್ಲ್ಯೂ<u>:-</u> **2**

ದಿನಾಂಕಃ **09-07-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ</u> **<u>5(</u>**<u>ಎ) ರಿಂದ (ಡಿ) ಪರ ವಕೀಲರಿಂದ:-</u>

ದಾವಾ ಆಸ್ತಿಯಲ್ಲಿ 5 ನೇ ಪ್ರತಿವಾದಿ ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಪಂಚಾಯಿತಿಯ ದಾಖಲೆಗಳಲ್ಲಿ 5 ನೇ ಪ್ರತಿವಾದಿಯ ಹೆಸರಿನಲ್ಲಿದೆ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿಯು ಕಟ್ಟಿಕೊಂಡ ಮನೆಯ ಮುಂಭಾಗದಲ್ಲಿ ಎಲೆಕ್ಟ್ರಿಕ್ ಕಂಬ ಇದೆ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿಯ ಮನೆಯ ಹಿಂಭಾಗದಲ್ಲಿ ಸುಮಾರು 30-35 ವರ್ಷಗಳ ತೆಂಗಿನ ಮರಗಳು ಮತ್ತು ನೀಲಗಿರಿ ಮರಗಳು ಇದೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ 1 ನೇ ಪ್ರತಿವಾದಿಯ ತಂದೆಯ ಸಮಾಧಿ ಇದೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಬಣಿವೆ, ತಿಪ್ಪೆ ಮತ್ತು 1 ನೇ ಪ್ರತಿವಾದಿಯ ತಂದೆಯ ಸಮಾಧಿ ಇದೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ದನಕರುಗಳನ್ನು ಕಟ್ಟಿಕೊಂಡು ವಾಸವಾಗಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಜಮೀನು ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಮನೆಯನ್ನು ಕಟ್ಟಿಕೊಂಡು ವಿದ್ಯುತ್ ಸಂಪರ್ಕವನ್ನು ಪಡೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. 1990-92 ರ ಸಾಲಿನಲ್ಲಿ ಡಿ ಸಿ ಬಿ ರಿಜಿಸ್ಟರ್ ನಲ್ಲಿ ದಾವಾ ಆಸ್ತಿಗೆ ಸಂಬಂಧಪಟ್ಟಂತೆ 22 ಇಂಟು 110 ಅಡಿ ಜಾಗವನ್ನು ನಮೂದು ಮಾಡಿದ್ದಾರೆ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿಯು ಕಾಲಕಾಲಕ್ಕೆ ಕಂದಾಯವನ್ನು ಕಟ್ಟುತ್ತಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ

ಪ್ರತಿವಾದಿಗಳು ಸ್ವಾಧೀನದಲ್ಲಿದ್ದರು ಸಹ ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ಮೋಸ ಮಾಡುವ ಉದ್ದೇಶದಿಂದ ವಿಭಾಗ ಪತ್ರದಲ್ಲಿ ದಾವಾ ಆಸ್ತಿಯನ್ನು ನಮೂದು ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ. ನಮ್ಮ ಕುಟುಂಬದಲ್ಲಿ ವಿಭಾಗ ಮಾಡಿಕೊಳ್ಳುವ ಸಮಯದಲ್ಲಿ ದಾವಾ ಆಸ್ತಿಯು ನಮ್ಮ ಸ್ವಾಧೀನದಲ್ಲಿ ಇಲ್ಲದಿದ್ದರೂ ಸಹ ಇದೆ ಎಂದು ತೋರಿಸಿಕೊಂಡು ವಿಭಾಗ ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ. ನನಗಾಗಲೀ ನಮ್ಮ ಕುಟುಂಬದವರಿಗಾಗಲೀ ದಾವಾ ಆಸ್ತಿಯಲ್ಲಿ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಸ್ವಾಧೀನದಲ್ಲಿ ಇರುವುದರಿಂದ ನನಗೆ ದಾವಾ ಆಸ್ತಿಯಲ್ಲಿ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.